ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **991 /2023**

| | | | |
|---|---|---|---|
| ಸಾಕ್ಷಿಯ ಹೆಸರು | : ವೈ.ಎಂ ಚಂದ್ರಮ್ಮ | ಸಿ.ಡಬ್ಲ್ಯೂ 1 | |
| ತಂದೆಯ ಹೆಸರು | : ಲೇಟ್ ನಾಗಪ್ಪ | ಪಿ.ಡಬ್ಲ್ಯೂ 1 | |
| ವಯಸ್ಸು | : 49 ವರ್ಷ | | |
| ಉದ್ಯೋಗ | : ಪಿ.ಎಸ್.ಐ | | |
| ವಾಸ ಸ್ಥಳ | : ಅಜ್ಜಂಪುರ | | |

ದಿನಾಂಕಃ**30-09-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2021 ರಿಂದ 2022 ರ ಮದ್ಯದಲ್ಲಿ ತರೀಕೆರೆ ಠಾಣೆಯಲ್ಲಿ ಪಿ.ಎಸ್.ಐ ಎಂದು ಕೆಲಸ ಮಾಡಿದ್ದೇನೆ. ದಿಃ14-12-2022 ರಂದು ಮಧ್ಯಾಹ್ನ 1-20 ರ ಸುಮಾರಿಗೆ ನಾನು ಠಾಣೆಯಲ್ಲಿ ಇದ್ದಾಗ ನಾಗೇನಹಳ್ಳಿ ಗ್ರಾಮದ ಅಂಬೇಡ್ಕರ್ ನಗರದ ರಸ್ತೆಯ ಬದಿಯಲ್ಲಿ ಯಾವುದೋ ಒಬ್ಬ ವ್ಯಕ್ತಿಯು ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿದ್ದಾನೆ ಎಂಬ ಖಚಿತ ಮಾಹಿತಿ ಬಂದಿತು. ಸದರಿ ವಿಷಯವನ್ನು ಚಾಸಾ-4 ರವರಿಗೆ ತಿಳಿಸಿ ಅವರನ್ನು ಜೊತೆಗೆ ಕರೆದುಕೊಂಡು ಇಲಾಖಾ ವಾಹನದಲ್ಲಿ 1-45 ಕ್ಕೆ ಠಾಣೆಯಿಂದ ಹೊರಟು 2-15 ನಿಮಿಷಕ್ಕೆ ನಾಗೇನಹಳ್ಳಿ ಸರ್ಕಾರಿ ಶಾಲೆಯ ಹತ್ತಿರ ಹೋಗಿ ಅಲ್ಲಿದ್ದ ಚಾಸಾ-2 ಮತ್ತು 3 ಇವರನ್ನು ಪಂಚರಾಗಲು ಕೋರಿ ಜೊತೆಯಲ್ಲಿ ಕರೆದುಕೊಂಡೆವು. ಶಾಲೆಯ ಪಕ್ಕದಲ್ಲಿ ಇರುವ ಅಂಬೇಡ್ಕರ್ ನಗರದ ರಸ್ತೆಯ ಮೇಲೆ ಒಬ್ಬ ವ್ಯಕ್ತಿಯು ಒಂದು ಪ್ಲಾಸ್ಟಿಕ್ ಚೀಲದಲ್ಲಿ ಯಾವುದೋ ವಸ್ತುಗಳನ್ನು ಇಟ್ಟುಕೊಂಡು ಮಾರಾಟ ಮಾಡುತ್ತಿರುವುದು ಕಂಡುಬಂತು. ಕೂಡಲೇ ದಾಳಿ ಮಾಡಿದಾಗ ಸಾರ್ವಜನಿಕರು ಓಡಿಹೋದರು. ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ವಿಚಾರಿಸಲಾಗಿ ಆತನು ತನ್ನ ಹೆಸರನ್ನು ಕೃಷ್ಣಮೂರ್ತಿ ತಂದೆ ಶಿವಲಿಂಗಪ್ಪ ಎಂದು ತಿಳಿಸಿದನು. ಚೀಲವನ್ನು ಪರೀಕ್ಷಿಸಲಾಗಿ ಅದರಲ್ಲಿ 90 ಎಂ.ಎಲ್ ನ 34 ಓ.ಸಿ ವಿಸ್ಕಿ ಟೆಟ್ರಾ ಪ್ಯಾಕೇಟುಗಳು ಇದ್ದವು. ಅವುಗಳನ್ನು ಸ್ವಾಧೀನದಲ್ಲಿ ಇಟ್ಟುಕೊಳ್ಳಲು ಮತ್ತು ಮಾರಾಟ ಮಾಡಲು ವ್ಯಕ್ತಿಯ ಬಳಿ ಯಾವುದೇ ಪರವಾನಗೆ ಇರಲಿಲ್ಲ. ಕಾರಣ ಪಂಚರ ಸಮಕ್ಷಮ ಮಧ್ಯಾಹ್ನ 2-30 ರಿಂದ 3-30 ರ ಮದ್ಯದಲ್ಲಿ ಪಂಚನಾಮೆಯನ್ನು ಜರುಗಿಸಿ ಮದ್ಯವನ್ನು ಪ್ಲಾಸ್ಟಿಕ್ ಚೀಲದ ಸಮೇತ ನನ್ನ ವಶಕ್ಕೆ ಪಡೆದುಕೊಂಡೆನು. ನಂತರ ಆರೋಪಿ ಮತ್ತು ಮುದ್ದೆಮಾಲಿನೊಂದಿಗೆ ಠಾಣೆಗೆ ಹಿಂತಿರುಗಿ ಸರ್ಕಾರದ ತರ್ಫೆ ನಾನೇ ಪಿರ್ಯಾದಿಯನ್ನು ಕೊಟ್ಟಿರುತ್ತೇನೆ. ಪಂಚನಾಮೆಯನ್ನು ನಿ.ಪಿ-1, ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ಭಾಚಿತ್ರವನ್ನು ನಿ.ಪಿ-2 ಮತ್ತು ದೂರನ್ನು ನಿ.ಪಿ-3, ಸಾಕ್ಷಿಯ ಸಹಿಯನ್ನು ನಿ.ಪಿ-3(ಎ) ಎಂದು ಗುರುತಿಸಲಾಯಿತು. ಮುದ್ದೆಮಾಲನ್ನು ಚೀಲದ ಸಮೇತವಾಗಿ ಮು.ಮಾ-1 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದ:</u>

ಮು.ಮಾ-1 ರಂತಹ ಟೆಟ್ರಾಪ್ಯಾಕೆಟುಗಳು ಬಾರ್ ಗಳಲ್ಲಿ ಸಾಮಾನ್ಯವಾಗಿ ಸಿಗುತ್ತವೆ ಎಂದರೆ ಸರಿ. ನಾನು ಸ್ಥಳಕ್ಕೆ ಹೋಗಿಲ್ಲ, ಯಾವುದೇ ದಾಳಿ ಮಾಡಿಲ್ಲ ಎಂದರೆ ಸರಿಯಲ್ಲ, ಆರೋಪಿಯಿಂದ ಯಾವುದೇ ಮದ್ಯವನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಕೊಟ್ಟ ದೂರಿಗೆ ಅನ್ವಯವಾಗಿ ಮುದ್ದೆಮಾಲನ್ನು ಕೇಸಿನಲ್ಲಿ ಹಾಕಿದ್ದೇನೆ ಎಂದರೆ ಸರಿಯಲ್ಲ. ಠಾಣೆಯ ಅಂಕಿ-ಸಂಖ್ಯೆಗೋಸ್ಕರ ಸುಳ್ಳು ದೂರನ್ನುಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ :</u> ಇಲ್ಲ:

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**

ಸಿಸಿ ನಂಬರ್ **/202**

| | | |
|---|---|---|
| ಸಾಕ್ಷಿಯ ಹೆಸರು | : | ಸಿ.ಡಬ್ಲ್ಯು |
| ತಂದೆಯ ಹೆಸರು | : | ಪಿ.ಡಬ್ಲ್ಯು |
| ವಯಸ್ಸು | : ವರ್ಷ | |
| ಉದ್ಯೋಗ | : | |
| ವಾಸ ಸ್ಥಳ | : | |

ದಿನಾಂಕಃ**17-09-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2019 ರಿಂದ 2024 ರವರೆಗೆ

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ಮರುವಿಚಾರಣೆ **:** ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.